ದಿನಾಂಕಃ **06-01-2026** ರಂದು ಸಾಕ್ಷಿಗೆ ಪುನಃ ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಾಟೀ ಸವಾಲು ಶ್ರೀ ಕೆ.ವಿ.ವೈ ಪರವಾಗಿ ಶ್ರೀ ಹೆಚ್ ಹೆಚ್ ವಕೀಲರಿಂದಃ ಆರೋಪಿ ಪರವಾಗಿ

ನಾನು ಬಿ.ಎ ಓದಿದ್ದೇನೆ. ದೂರನ್ನು ಪೊಲೀಸರು ಬರೆದುಕೊಂಡಿದ್ದರು. ಆ ರೀತಿ ನಾನು ಬರೆದುಕೊಳ್ಳಲು ಹೇಳಿರುತ್ತೇನೆ ಎಂದು ಹೇಳುತ್ತಾರೆ. ನಾನು ಆರೋಪಿಗೆ ಈ ಮೊದಲು ನೋಡಿರಲಿಲ್ಲ. ದೂರು ಕೊಟ್ಟ **2** ತಿಂಗಳು ಬಳಿಕ ಪೊಲೀಸರು ನನಗೆ ಪೋನ್ ಮಾಡಿದ್ದರು. ಪೊಲೀಸರು ಹೇಳಿದ ಬಳಿಕವಷ್ಟೆ ನನಗೆ ಕಳ್ಳತನ ಮಾಡಿದ ವ್ಯಕ್ತಿ ಯಾರು ಎಂದು ತಿಳಿದು ಬಂತು. ಆರೋಪಿಗೂ ಮತ್ತು ಈ ಘಟನೆಗೂ ಯಾವುದೇ ಸಂಬಂಧ ಇಲ್ಲದೇ ಇದ್ದರೂ ಸಹ ನಾನು ಸುಳ್ಳು ದೂರನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ. ಪೊಲೀಸರು ನನಗೆ ಮಹಜರ್ ಗೆ ಬರಲು ನೋಟೀಸ್ ಕೊಟ್ಟಿರಲಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಪೊಲೀಸರ ಜೊತೆ ಶಾಮೀಲಾಗಿ ಸುಳ್ಳು ದೂರನ್ನು ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನಿಪಿ-**4** ಪಂಚನಾಮೆಗೆ ನಾನು ಠಾಣೆಯಲ್ಲಿಯೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-**6** ಮತ್ತು **7** ಪೋಟೋದಲ್ಲಿರುವ ವಸ್ತುಗಳಿಗೂ ನನಗೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ಹೇಳಿದಂತೆ ಪೊಲೀಸರು ಸ್ಥಳಕ್ಕೆ ಬಂದಿಲ್ಲ ಮತ್ತು ಸ್ಥಳದಲ್ಲಿ ಯಾವುದೇ ಮಹಜರ್ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಯನ್ನು ಪೊಲೀಸರು ನನಗೆ ತೋರಿಸಿರಲಿಲ್ಲ ಮತ್ತು ಆ ರೀತಿ ತೋರಿಸಿದ್ದರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯನ್ನು ಇದೇ ಮೊದಲನೇ ಬಾರಿಗೆ ನ್ಯಾಯಾಲಯದಲ್ಲಿ

ನೋಡುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ದೂರನ್ನು ಕೊಟ್ಟು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ - ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

(ಮೊಹಮ್ಮದ್ ಆರೀಫುಲ್ಲಾ ಸಿ.ಎಫ್)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ
ತಿಪಟೂರು.